ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

597 (807) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ವಾರ್ತಾ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರವಾಸೋದ್ಯಮ ಇಲಾಖೆ ಅಡಿಯಲ್ಲಿ ಕೈಗೆತ್ತಿಕೊಳ್ಳಬಹುದಾದ ಕಾಮಗಾರಿಗಳು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಗೆ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ಕಾಮಗಾರಿಗಳಾವುವು; (ತಾಲ್ಲೂಕುವಾರು, ಕಾಮಗಾರಿವಾರು, ವಿವರವಾದ ಮಾಹಿತಿ ನೀಡುವುದು)

(ಇ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಸಾಲುಗಳಲ್ಲಿ ಮಂಜೂರಾದ ಕಾಮಗಾರಿಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು; ಸದರಿ ಕಾಮಗಾರಿಗಳಿಗೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದರೂ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಉಳಿಕೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು? (ವಿವರವಾದ ಮಾಹಿತಿ ನೀಡುವುದು)